# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1040
ಸದಸ್ಯರ ಹೆಸರು ಶ್ರೀ. ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ: 10.03.2021
ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಇಲಾಖೆ

| ಕ್ರಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | 2018-19 ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಲೆ.ಶೀ 5054-04-337-0-01-154 ರಡಿ ನಾಗಮಂಗಲ ತಾಲ್ಲೂಕಿನ ಕಾಂತಾಪುರ ಮಾರ್ಗರಾಜ್ಯ ಹೆದ್ದಾರಿ-19 ನ್ನು(ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆ ಮತ್ತು ನಾಗಮಂಗಲ ತಾಲ್ಲೂಕು ದೇವಲಾಪುರ-ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ರಾಜ್ಯ ಹೆದ್ದಾರಿ ಅಭಿವೃದ್ಧಿಪಡಿಸುವ ಕಾಮಗಾರಿಯು ರೂ.750.00 ಲಕ್ಷಗಳಿಗೆ ಮಂಜೂರಾಗಿದ್ದು, ಪ್ರಸ್ತುತ, ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದರೂ ಇನ್ನೂ ಕಾಮಗಾರಿ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | • ನಾಗಮಂಗಲ ತಾಲ್ಲೂಕಿನ 1)ಕೋಳಾಲ, ತುರುವೇಕೆರೆ, ದಬ್ಬೆಘಟ್ಟ, ಚಾಮಲಾಪುರ, ಅದ್ದಿಹಳ್ಳಿ, ಕಾಂತಾಪುರ ಮಾರ್ಗ ರಾಜ್ಯಹೆದ್ದಾರಿ 19 (ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ಸರಪಳಿ: 1.00 ರಿಂದ 5.50 ಕಿ.ಮೀ. ವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ ಮತ್ತು 2)ದೇವಲಾಪುರ ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ಸರಪಳಿ 1.40 ರಿಂದ 5.00 ಕಿ.ಮೀ. ವರೆಗೆ ರಸ್ತೆ ಅಭಿವೃದ್ಧಿಪಡಿಸಲು ರೂ.750.00 ಲಕ್ಷಗಳ ಮೊತ್ತದ ಪ್ಯಾಕೇಜ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ.<br>• ಸದರಿ ಕಾಮಗಾರಿಯನ್ನು ನಿರ್ವಹಿಸಲು ಟೆಂಡರ್ ಕರೆದು ಗುತ್ತಿಗೆದಾರರನ್ನು ನಿಗದಿಪಡಿಸಿ, ದಿನಾಂಕ:14.09.2020 ರಂದು ಗುತ್ತಿಗೆದಾರರಿಗೆ ವಹಿಸಲಾಗಿರುತ್ತದೆ. ಕಾಮಗಾರಿಯನ್ನು ಕರಾರಿನ್ವಯ ದಿನಾಂಕ:13.03.2021ಕ್ಕೆ ಪೂರ್ಣಗೊಳಿಸ ಬೇಕಾಗಿರುತ್ತದೆ.<br>• ಕಾಂತಾಪುರ ಮಾರ್ಗರಾಜ್ಯ ಹೆದ್ದಾರಿ-19(ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯಲ್ಲಿ ವೆಟ್‌ಮಿಕ್ಸ್ ಕಾಮಗಾರಿ ಮುಗಿದಿದ್ದು, ಡಾಂಬರೀಕರಣ ಕಾಮಗಾರಿಯನ್ನು ಮಾಡಬೇಕಾಗಿರುತ್ತದೆ. ಮತ್ತು ದೇವಲಾಪುರ-ಮಾರ್ಕೋನಹಳ್ಳಿ ರಸ್ತೆಯಲ್ಲಿ ಕಾಂಕ್ರೀಟ್ ಚರಂಡಿ ಕಾಮಗಾರಿ ಮುಗಿದಿದ್ದು, ಜಿ.ಎಸ್.ಬಿ ಕಾಮಗಾರಿ ಪ್ರಗತಿಯಲ್ಲಿರುತ್ತದೆ.<br><br>ಆದರೆ ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ರ ಹಿನ್ನಲೆಯಲ್ಲಿ ಕೆಲಸಗಾರರ ಕೊರತೆಯೊಂದಾಗಿ ಕಾಮಗಾರಿ ಪ್ರಗತಿ ತುಸು ಕುಂಠಿತವಾಗಿರುತ್ತದೆ. ಕುಂಠಿತ ಪ್ರಗತಿಯ ಬಗ್ಗೆ ಗುತ್ತಿಗೆದಾರರಿಗೆ ಉಪವಿಭಾಗ ಕಛೇರಿಯಿಂದ ಸದರಿ ಕಾಮಗಾರಿಗಳನ್ನು ಜರೂರು ಪೂರ್ಣಗೊಳಿಸುವಂತೆ ನೋಟೀಸ್ ನೀಡಲಾಗಿರುತ್ತದೆ. ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಂಡು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ. |

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಆ)</td><td>ಸದರಿ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು, ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಗುಣಮಟ್ಟ ಪರಿಶೀಲಿಸಲು ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)</td><td rowspan="3">ಸದರಿ ಕಾಮಗಾರಿಯನ್ನು ಅನುಮೋದಿತ ಅಂದಾಜು ಪಟ್ಟಿಯಂತೆ ನಿರ್ವಹಿಸಲಾಗುತ್ತಿದ್ದು ಕಾಮಗಾರಿಯ ಪ್ರತಿ ಹಂತದಲ್ಲೂ ಗುಣ ಭರವಸೆ ಅಧಿಕಾರಿಗಳಿಂದ ಪರಿವೀಕ್ಷಣೆಗೊಳಪಡಿಸಿಕೊಂಡು ಫಲಿತಾಂಶ ವರದಿಯನ್ನು ಪಡೆದು ಕಾಮಗಾರಿಯನ್ನು ನಿರ್ವಹಿಸಲಾಗುತ್ತಿದೆ. ಕಾಮಗಾರಿ ಕರಾರಿನನ್ವಯ ದಿನಾಂಕ:13.03.2021ಕ್ಕೆ ಪೂರ್ಣಗೊಳಿಸಬೇಕಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಕರಾರು ಅವಧಿಯಲ್ಲಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸಂಬಂಧಿಸಿದ ಗುತ್ತಿಗೆದಾರರಿಗೆ ಉಪ ವಿಭಾಗದಿಂದ ಈಗಾಗಲೇ ನೋಟೀಸ್ ನೀಡಲಾಗಿರುತ್ತದೆ. ಆದಷ್ಟು ಬೇಗನೆ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗುವುದು.</td></tr>
<tr><td>ಇ)</td><td>ಕಾಮಗಾರಿ ವಿಳಂಬದಿಂದ ಸುತ್ತುಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ತುರ್ತು ಕಾಮಕಾರಿಯನ್ನು ಗುಣಮಟ್ಟದಿಂದ ಯಾವಾಗ ಪೂರ್ಣಗೊಳಿಸಲಾಗುವುದು (ವಿವರ ನೀಡುವುದು)</td></tr>
<tr><td>ಈ)</td><td>ಈ ಸಂಬಂಧ, ಸಂಬಂಧಪಟ್ಟ ಗುತ್ತಿಗೆದಾರರು, ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಕೈಗೊಳ್ಳಲಾದ ಶಿಸ್ತು ಕ್ರಮವೇನು? (ವಿವರ ನೀಡುವುದು)</td></tr>
</table>

ಲೋಇ 24 ಸಿಕ್ಯೂಎನ್ 2021(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು,
ಲೋಕೋಪಯೋಗಿ ಇಲಾಖೆ